ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560 001**

ಸಂಖ್ಯೆ: ಸಿ7(2)ಪ್ರಾ.ಶಿ.ಅ.ಇತರೆ17/2011-12 ದಿನಾಂಕ: 02/05/2013

**ಸುತ್ತೋಲೆ**

ವಿಷಯ:- ಖಾಸಗಿ ಪೂರ್ವ ಪ್ರಾಥಮಿಕ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶವನ್ನು ನಿಯಂತ್ರಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

ಉಲ್ಲೇಖ:-1. ಕರ್ನಾಟಕ ಶಿಕ್ಷಣ ಕಾಯಿದೆ 1983ರ ಹಿನ್ನೆಲೆಯಲ್ಲಿ ರಚಿತವಾದ Karnataka educational institutions(Classification, Regulation and prescription of curricula,etc)Rules 1995 ಮತ್ತು ಸರ್ಕಾರದ ಅಧಿಸೂಚನೆ ಇಡಿ 71ವಿವಿಧ 98,ದಿನಾಂಕ.08.10.1999ಮತ್ತು .ಸರ್ಕಾರಿ ಆದೇಶ ಸಂಖ್ಯೆ:ಇಡಿ04 ವಿ.ವಿ.ಧ 2001 ದಿನಾಂಕ.05.07.2001.

2. ಸರ್ಕಾರ ಅಧಿಸೂಚನೆ ಇಡಿ71ವಿವಿಧ98 ದಿನಾಂಕ:14-03-2000.
3. ಈ ಕಛೇರಿ ಸುತ್ತೋಲೆ ಸಿ8(1)ಶಾ.ಶಿ.ಅ.ಡೋ.ಹಾ21/11-12 ದಿನಾಂಕ: 08-12-2011.

************

ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶದಲ್ಲಿ ಪಾರದರ್ಶಕತೆಯಿಲ್ಲದಿರುವುದು ಮತ್ತು ನಿಗದಿತ ಶುಲ್ಕಕ್ಕಿಂತ ಹೆಚ್ಚು ಹೆಚ್ಚು ಶುಲ್ಕ ವಸೂಲು ಮಾಡುತ್ತಿರುವ ವಿಷಯ ವಿವಿಧ ವೇದಿಕೆಗಳಲ್ಲಿ ಸಾರ್ವಜನಿಕ ಚರ್ಚೆಯ ವಸ್ತುವಾಗಿದೆ. ಈ ಸಂಬಂಧ ಸರ್ಕಾರ/ಇಲಾಖೆಯು ಖಚಿತ ನಿರ್ದೇಶನವನ್ನು ಹಿಂದಿನಿಂದ ನೀಡುತ್ತಾ ಬಂದಿದೆ. ಆದಾಗ್ಯೂ ಅಲ್ಲಲ್ಲಿ ದೂರುಗಳು ಸ್ವೀಕೃತವಾಗುತ್ತಲಿವೆ. ಇವುಗಳನ್ನು ನಿಯಂತ್ರಿಸಲು ಉಲ್ಲೇಖ(2)ರ ಪತ್ರದ ಸುತ್ತೋಲೆಯಲ್ಲಿ ದಾಖಲಾತಿಗೆ ಸಂಬಂಧಪಟ್ಟಂತೆ ಕೈಗೊಳ್ಳಬೇಕಾದ ಕ್ರಮಗಳ ವೇಳಾಪಟ್ಟಿಯನ್ನು ಪ್ರಕಟಿಸಿ ಅದರಂತೆ ಈ ಪ್ರಕ್ರಿಯೆಯನ್ನು ಪ್ರತಿ ವರ್ಷ ಶೈಕ್ಷಣಿಕ ವರ್ಷದ ದಾಖಲಾತಿ ಪ್ರಾರಂಭಕ್ಕೆ ಮೊದಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿತ್ತು. ಪ್ರವೇಶ ಪ್ರಕ್ರಿಯೆ ನಿಯಂತ್ರಣದ ಬಗ್ಗೆ ಉಲ್ಲೇಖ(1)ರ ಕರ್ನಾಟಕ ಶಿಕ್ಷಣ ಕಾಯಿದೆ 1983 ರಲ್ಲಿ ರಚಿತವಾದ Karnataka educational institutions(Classification, Regulation and prescription of curricula,etc)Rule 1995 ಮತ್ತು ಸರ್ಕಾರದ ಅಧಿಸೂಚನೆ ಇಡಿ 71ವಿವಿಧ 98,ದಿನಾಂಕ.08.10.1999 ಮತ್ತು ಸರ್ಕಾರಿ ಆದೇಶ ಸಂಖ್ಯೆ:ಇಡಿ04 ವಿ.ವಿ.ಧ 2001 ದಿನಾಂಕ.05.07.2001 ರ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರದ ಅಧ್ಯಕ್ಷರನ್ನು ಸಂಪರ್ಕಿಸಿ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಚರ್ಚಿಸಿ ಕ್ರಿಯಾ ಯೋಜನೆಯನ್ನು ರೂಪಿಸಿಕೊಂಡು ಪ್ರವೇಶ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸುವ ಬಗ್ಗೆ ಶಾಲೆಗಳ ಆಡಳಿತ ಮಂಡಳಿಗಳಿಗೆ ಹಾಗೂ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರದ ಮೂಲಕ ಈ ಕೆಳಕಂಡಂತೆ ಕ್ರಮ ಕೈಗೊಳ್ಳುವುದು.

1. ಶಾಲಾ ಆಡಳಿತ ಮಂಡಳಿಯವರು ಶಾಲೆಗಳಲ್ಲಿ ಪ್ರವೇಶ ನೀಡುವಾಗ ಶಾಲೆಯಲ್ಲಿ ಪಡೆಯಲಾಗುವ ಶುಲ್ಕದ ವಿವರವನ್ನು ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿರಬೇಕು. ಮತ್ತು ಎಲ್ಲಾ ಪೋಷಕರಿಗೆ ಶುಲ್ಕದ ವಿವರ ಕುರಿತು ಅರಿವು ಮೂಡಿಸುವ ಜವಾಬ್ದಾರಿ ಆಯಾ ಶಾಲೆಯ ಆಡಳಿತ ಮಂಡಳಿಯವರದ್ದಾಗಿರುತ್ತದೆ.
2. ಪೋಷಕರಿಂದ ಎಷ್ಟು ಶುಲ್ಕವನ್ನು ಪಡೆಯಲಾಗಿದೆಯೋ ಅಷ್ಟಕ್ಕೆ ಕಡ್ಡಾಯವಾಗಿ ರಸೀದಿ ನೀಡಬೇಕು.
3. ಕೆಲವು ಶಾಲೆಗಳ ಆಡಳಿತ ಮಂಡಳಿಯವರು ವರ್ಷದಲ್ಲಿ ಎರಡು ಮೂರು ಬಾರಿ ಶುಲ್ಕವನ್ನು ಹೆಚ್ಚಿಸಿ ವಸೂಲಿ ಮಾಡುತ್ತಿರುವ ಬಗ್ಗೆ ದಿನಪತ್ರಿಕೆಗಳಲ್ಲಿ ಮತ್ತು ಸಾರ್ವಜನಿಕರಿಂದ ಇಲಾಖೆಗೆ ದೂರುಗಳು ಬರುತ್ತಿವೆ. ಇಲಾಖೆಯು ಇದನ್ನುಗಂಭೀರವಾಗಿ ಪರಿಗಣಿಸಿದೆ. ಹೀಗಾಗದಂತೆ ಕ್ಷೇತ್ರಶಿಕ್ಷಣಾಧಿಕಾರಿಗಳು/ಉಪನಿರ್ದೇಶಕರು ಇಂತಹ ದೂರುಗಳು ಬಂದಲ್ಲಿ ತಕ್ಷಣ ಅಗತ್ಯ ಕ್ರಮ ವಹಿಸುವುದು.
4. ಶಾಲೆಗಳಲ್ಲಿ ದಾಖಲಾತಿ ಸಂಧರ್ಭದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಡೊನೇಷನ್ ವಸೂಲಿ ಮಾಡುತ್ತಿದ್ದಾರೆ ಎಂದು ದಿನಪತ್ರಿಕೆಗಳಲ್ಲಿ ಮತ್ತು ಸಾರ್ವಜನಿಕರಿಂದ ಇಲಾಖೆಗೆ ವ್ಯಾಪಕ ದೂರುಗಳು ಬರುತ್ತಿದ್ದು ಈ ಸಂಬಂಧ ಜಿಲ್ಲಾ ಹಂತದಲ್ಲಿರುವ ಜಿಲ್ಲಾ ಶಿಕ್ಷಣಾ ನಿಯಂತ್ರಣ ಪ್ರಾಧಿಕಾರದ ಮೂಲಕ ಇದನ್ನು ತಡೆಗಟ್ಟುವ ಬಗ್ಗೆ ಆಡಳಿತ ಮಂಡಳಿಗಳ ಮೇಲೆ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದು. ಈ ಬಗ್ಗೆ ಸಾರ್ವಜನಿಕರಿಗೆ ಪತ್ರಿಕೆಗಳ ಮೂಲಕ ವ್ಯಾಪಕ ಪ್ರಚಾರ ನೀಡುವುದು.
5. ಪ್ರವೇಶ ಪ್ರಕ್ರಿಯೆ ಮತ್ತು ಶುಲ್ಕ ವಸೂಲಾತಿಯಲ್ಲಿ ಉಲ್ಲಂಘನೆಯ ಪ್ರಕರಣಗಳನ್ನು ಸಾರ್ವಜನಿಕರು ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ ಗಮನಕ್ಕೆ ತರುವಂತೆ ವ್ಯಾಪಕ ಪ್ರಚಾರ ನೀಡತಕ್ಕದ್ದು. ಇದಕ್ಕಾಗಿ ಸಮೂಹ ಮಾಧ್ಯಮಗಳಲ್ಲಿ ಪ್ರಚಾರ ಕಾರ್ಯ ಕೈಗೊಳ್ಳುವ ಸಂಬಂಧ ಅಗತ್ಯ ಕ್ರಮ ವಹಿಸುವುದು.

(ಎಸ್.ಆರ್. ಉಮಾಶಂಕರ್)
ಆಯುಕ್ತರು

ಇವರಿಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರ ಮುಖಾಂತರ.